**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 851 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 23.02.2023 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಅಬಕಾರಿ ಇಲಾಖೆಗೆ ಸರ್ಕಾರವು ಇಂತಿಷ್ಟೆ ಗರಿಷ್ಠಮಿತಿಯ ಮದ್ಯ ಮಾರಾಟ ಮಾಡಲು ಗುರಿ ನಿಗದಿಪಡಿಸಿದೆಯೇ; ಗುರಿ ನಿಗದಿಪಡಿಸಿದ್ದಲ್ಲಿ ಕುಡಿತವನ್ನು ಪ್ರೋತ್ಸಾಹಿಸದಂತಾಗುವುದಲ್ಲವೇ; | ಸರ್ಕಾರವು ಅಬಕಾರಿ ಇಲಾಖೆಗೆ ಮದ್ಯ ಮಾರಾಟಕ್ಕೆ ಯಾವುದೇ ಪ್ರತ್ಯೇಕ ಗುರಿಯನ್ನು ನಿಗದಿಪಡಿಸಿರುವುದಿಲ್ಲ. |
| ಆ | ರಾಜ್ಯದಲ್ಲಿ ಪ್ರತಿವರ್ಷ ಕುಡಿತದ ಚಟಕ್ಕೆ ಒಳಗಾಗುತ್ತಿರುವ ಯುವಜನತೆಯ ಸಂಖ್ಯೆಯು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕುಡಿತವನ್ನು ಪ್ರೋತ್ಸಾಹಿಸುವ ಬದಲು ಅದಕ್ಕೆ ಕಡಿವಾಣ ಹಾಕಲು ಸರ್ಕಾರ ಏನು ಕ್ರಮ ಕೈಗೊಂಡಿದೆ? | ಯುವ ಜನತೆಯಲ್ಲಿ ಕುಡಿತದ ಚಟವು ಹೆಚ್ಚಾಗುತ್ತಿರುವ ಬಗ್ಗೆ ಇಲಾಖಾ ವತಿಯಿಂದ ಯಾವುದೇ ಅಧ್ಯಯನವನ್ನು ಕೈಗೊಂಡಿರುವುದಿಲ್ಲ.<br><br>ಇಲಾಖೆಯು ಕುಡಿತವನ್ನು ಪ್ರೋತ್ಸಾಹಿಸುವುದಿಲ್ಲ, ಮೇಲಾಗಿ ಮದ್ಯದ ತಯಾರಿಕೆ, ಸಾಗಾಣಿಕೆ, ಸ್ವಾಧೀನತೆ, ಮಾರಾಟ ಮತ್ತು ಇತರೆ ವ್ಯಾಪಾರ ಚಟುವಟಿಕೆಗಳನ್ನು ನಿಯಂತ್ರಿಸುವ ಮೂಲಕ ಅಬಕಾರಿ ನೀತಿಗಳ ಮತ್ತು ಪ್ರಕ್ರಿಯೆಗಳನ್ನು ಜಾರಿಗೊಳಿಸಿ ತೆರಿಗೆ ಸಂಗ್ರಹಣೆಯಲ್ಲಿ ನಿಗಾವಹಿಸಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಮದ್ಯ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಹಾಗೆಯೇ, ಇಲಾಖೆಯ ಅಧಿಕಾರಿಗಳು ನಡೆಸುವ ಗ್ರಾಮ ಹಾಗೂ ವಾರ್ಡ್ ಸಭೆಗಳಲ್ಲಿಯೂ ಕೂಡ ಕುಡಿತದಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ತಿಳಿ ಹೇಳಲಾಗುತ್ತಿದೆ. |

ಆಇ 20 ಇಎಲ್‌ಕ್ಯೂ 2023

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K. FD-EXCISE MIN(GK), EXCISE MINISTER, FINANCE DEPT.SEC on 22/02/2023 02:52 PM